**ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ**

**ಸಿ.ಸಿ.ನಂ.259/2024**

ಫಿರ್ಯಾದಿಃ ಕರ್ನಾಟಕ ಸರ್ಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ : ರಾಮಲಿಂಗಪ್ಪಾ ತಂದೆ ಭೀಮಯ್ಯಾ ಕಲಾಲ
ವಃ 49 ವರ್ಷ, ಉಃ ಕೂಲಿ ಕೆಲಸ
ಸಾಃ ದುಗನೂರ ಗ್ರಾಮ
ತಾಃ ಸೇಡಂ

-----

**ದೋಷಾರೋಪಣೆ**

ನಾನು ಶ್ರೀ ಬಾಲು, ಬಿ.ಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 19-01-2024ರಂದು ಮಧ್ಯಾಹ್ನ 12.40 ಗಂಟೆ ಸುಮಾರಿಗೆ ಸೇಡಂ ಪೋಲಿಸ ಠಾಣಾ ವ್ಯಾಪ್ತಿಯಲ್ಲಿ ಬರುವ ದುಗನೂರ ಗ್ರಾಮದ ಗೇಟ ಹತ್ತಿರ ಇರುವ ಬಸವೇಶ್ವರ ಕಟ್ಟೆಯ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಆರೋಪಿ 1 ನೇದ್ದವನು ರಸ್ತೆಯಲ್ಲಿ ಹೋಗಿ ಬರುವ ಸಾರ್ವಜನಿಕರಿಗೆ ಕರೆದು ಇದು ಕಲ್ಯಾಣ ಮಟಕಾ ಇದೆ 10/- ರೂಪಾಯಿಗೆ 800/- ರೂಪಾಯಿಗಳು ಬರುತ್ತವೆ, 100/- ರೂ. ಗೆ 8,000/- ರೂ ಬರುತ್ತವೆ ಅಂತ ಸುಳ್ಳು ಹೇಳಿ ಸಾರ್ವಜನಿಕರಿಂದ ಅಕ್ರಮವಾಗಿ ಹಣ ಪಡೆದು ಮಟಕಾ ಜೂಜಾಟ ಆಡುತ್ತಿದ್ದಾಗ ಚಾಸಾ1 ಹಾಗೂ 4 ರಿಂದ 6 ರವರು ಕೂಡಿ ಚಾಸಾ.2, 3 ನೇದ್ದವರ ಸಮಕ್ಷಮದಲ್ಲಿ ಆರೋಪಿ.1 ನೇದ್ದವನಿಗೆ ದಾಳಿ ಮಾಡಿ ಹಿಡಿದು ಆರೋಪಿತನಿಂದ ನಗದು ಹಣ 720/- ರೂ ಮತ್ತು ಒಂದು ಮಟಕಾ ನಂಬರ ಬರೆದ ಚೀಟಿ ಮತ್ತು ಒಂದು ಬಾಲ ಪೆನ್ ನೇದ್ದವುಗಳನ್ನು ಜಪ್ತ ಮಾಡಿಕೊಂಡಿದ್ದು ಇರುತ್ತದೆ, ಕಾರಣ ಆರೋಪಿತನಾದ ನೀನು ಕಲಂ 78(iii) ಕೆ.ಪಿ. ಆಕ್ಟ ನ್ನೆದ್ದರ ಅಡಿಯಲ್ಲಿ , ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 21-02-2026 ಪ್ರ.ದ.ನ್ಯಾ.ದಂ. ಸೇಡಂ.

**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.</u>**

**<u>ಸಿಸಿ ನಂ.259/2024</u>**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ದ ಃಃ-

ಆರೋಪಿ ಃ ರಾಮಲಿಂಗಪ್ಪಾ ತಂದೆ ಭೀಮಯ್ಯಾ ಕಲಾಲ
ವಃ 49 ವರ್ಷ, ಉಃ ಕೂಲಿ ಕೆಲಸ
ಸಾಃ ದುಗನೂರ ಗ್ರಾಮ
ತಾಃ ಸೇಡಂ

**<u>ಆರೋಪಿತರ ಹೇಳಿಕೆ</u>**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ

(ದೋಷಾರೋಪಣೆಯನ್ನು ಆರೋಪಿತನಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕಃ 21-02-2026 ಪ್ರ.ದ.ನ್ಯಾ.ದಂ. ಸೇಡಂ.